# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 154 ಆರ್ ಟಿಐ 2016

ಕರ್ನಾಟಕ ಸರ್ಕಾರದ ಸಚಿವಾಲಯ,
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಗೋಪುರ,
ಬೆಂಗಳೂರು, ದಿನಾಂಕ: 30.05.2019.

## ಅಧಿಸೂಚನೆ

ಮಾಹಿತಿ ಹಕ್ಕು ಅಧಿನಿಯಮ, 2005ರ (2005ರ ಕೇಂದ್ರ ಅಧಿನಿಯಮ ಸಂ:22) 27ನೇ ಪ್ರಕರಣದ (1) ಮತ್ತು (2)ನೇ ಉಪ ಪ್ರಕರಣಗಳ ಮೂಲಕ ಪ್ರದತ್ತವಾದ ಅಧಿಕಾರಿಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ, ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು, 2005ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಈ ಮುಂದಿನ ನಿಯಮಗಳನ್ನು ರಚಿಸುತ್ತದೆ ಎಂದರೆ:-

1. **ಹೆಸರು ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಮಾಹಿತಿ ಹಕ್ಕು (ತಿದ್ದುಪಡಿ) ನಿಯಮಗಳು, 2019 ಎಂದು ಕರಯಗತಕ್ಕದ್ದು.

(2) ಅವುಗಳು, ಅಧಿಕೃತ ರಾಜ್ಯಪತ್ರದಲ್ಲಿ ಅವುಗಳನ್ನು ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ನಿಯಮ 11ರ ತಿದ್ದುಪಡಿ:-** ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು 2005ರ 11ನೇ ನಿಯಮದ (2) ನೇ ಉಪ ನಿಯಮದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(2A) ಮೇಲ್ಮನವಿದಾರ ಅಥವಾ ದೂರುದಾರನು ಮರಣ ಹೊಂದಿದ ಪಕ್ಷದಲ್ಲಿ ಸಂದರ್ಭಾನುಸಾರ ಅವನು ಸಲ್ಲಿಸಿದ ಮೇಲ್ಮನವಿ ಅಥವಾ ದೂರು ಕೊನೆಗೊಳ್ಳುವುದು"

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಜಾಹೀದಾ ಎನ್.ಗಚ್ಚಿನಮಹಲ್)**
ಸರ್ಕಾರದ ಅಧೀನ ಕಾರ್ಯದರ್ಶಿ-1 (ಪ್ರ)
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)